# ಕನ್ನಡ ವಿಶ್ವವಿದ್ಯಾಲಯ, ಹಂಪಿ

## ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ
## ಸಮಾಜಮುಖಿ ತಿಂಗಳ ಮಾತು–6

# ಕುರಿಗಾಹಿಗಳ ಬದುಕು ಮತ್ತು ಬವಣೆ

## ತಳಸಮುದಾಯಗಳ ಅಧ್ಯಯನ ಕ್ಷೇತ್ರ ಕನ್ನಡ ವಿಶ್ವವಿದ್ಯಾಲಯ

– **ಡಾ. ಎಫ್.ಟಿ. ಹಳ್ಳಿಕೇರಿ,** ಭಾಷಾ ನಿಕಾಯದ ಡೀನರು

ತಳಸಮುದಾಯಗಳಲ್ಲಿ ಒಂದಾದ ಅಲೆಮಾರಿ ಕುರಿಗಾಹಿ ಸಮುದಾಯವು ಅಪರೂಪದ ಸಮುದಾಯವಾಗಿದ್ದು, ಇಂತಹ ಸಮುದಾಯಗಳ ಕುರಿತು ಅಧ್ಯಯನ ಮಾಡುವ ಸಂಶೋಧನಾ ವಿದ್ಯಾರ್ಥಿಗಳು ಸಂಶೋಧನೆಯ ಆಕಾರವನ್ನು ತಾವೇ ಸೃಷ್ಟಿಸಬೇಕು ಎಂದು ಭಾಷಾ ನಿಕಾಯದ ಡೀನರಾದ **ಡಾ.ಎಫ್.ಟಿ. ಹಳ್ಳಿಕೇರಿಯ**ವರು ಅಭಿಪ್ರಾಯಪಟ್ಟರು.




ಸಮಾಜಮುಖಿ ತಿಂಗಳ ಮಾತು–6 ಕಾರ್ಯಕ್ರಮದಲ್ಲಿ ಕುರಿಗಾಹಿಗಳ ಬದುಕು ಮತ್ತು ಬವಣೆ ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಭಾಷಾ ನಿಕಾಯದ ಡೀನರಾದ ಡಾ. ಎಫ್.ಟಿ. ಹಳ್ಳಿಕೇರಿ ಅವರು ಮಾತನಾಡಿದರು.

ಕನ್ನಡ ವಿಶ್ವವಿದ್ಯಾಲಯದ **ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ**ದಿಂದ **ಸಮಾಜಮುಖಿ ತಿಂಗಳ ಮಾತು–6** ಕಾರ್ಯಕ್ರಮದಲ್ಲಿ **ಕುರಿಗಾಹಿಗಳ ಬದುಕು ಮತ್ತು ಬವಣೆ** ವಿಷಯದ ಕುರಿತು ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿತ್ತು.

ಮುಂದುವರೆದು ಮಾತನಾಡುತ್ತ ಕನ್ನಡ ವಿಶ್ವವಿದ್ಯಾಲಯವು ತಳ ಸಮುದಾಯಗಳ ಅಭಿವೃದ್ಧಿಗೆ ಸದಾ ಸ್ಪಂದಿಸುತ್ತದೆ. ಇದುವರೆಗೂ ಹಲವಾರು ತಳ ಸಮುದಾಯಗಳು ಮತ್ತು ಬುಡಕಟ್ಟು ಸಮುದಾಯಗಳ ಕುರಿತು ಸಂಶೋಧನೆಗಳನ್ನು ನಡೆಸುವ ಮೂಲಕ ಆ ಸಮುದಾಯಗಳನ್ನು ಮುಖ್ಯವಾಹಿನಿಗೆ ತರುವ ಕೆಲಸದಲ್ಲಿ ಕನ್ನಡ ವಿಶ್ವವಿದ್ಯಾಲಯ ತೊಡಗಿಕೊಂಡಿರುವುದಾಗಿ ತಿಳಿಸಿದರು.

ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪಿಎಚ್.ಡಿ ಸಂಶೋಧಕರಾದ **ತಿಪ್ಪೇಸ್ವಾಮಿ ಬಿ** ಅವರು **ಕೊಪ್ಪಳ ಜಿಲ್ಲೆಯ ಸೀಮಿತ ಪ್ರದೇಶದಲ್ಲಿ ಕುರಿಗಾಹಿಗಳ ಬದುಕು ಮತ್ತು ಬವಣೆ** ಎಂಬ ವಿಷಯದ ಕುರಿತ ಉಪನ್ಯಾಸದಲ್ಲಿ ಕುರಿಗಾಹಿಗಳ ಜೀವನ, ಧಾರ್ಮಿಕ ಆಚರಣೆ ಮತ್ತು ಅವರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಕುರಿತು ಮಾತನಾಡಿದರು.




ಕುರಿಗಾಹಿಗಳ ಬದುಕು ಮತ್ತು ಬವಣೆ ವಿಷಯದ ಕುರಿತು ಸಂಶೋಧನಾರ್ಥಿ ತಿಪ್ಪೇಶ ಬಿ. ಅವರು ಉಪನ್ಯಾಸವನ್ನು ನೀಡಿದರು.

ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರಾದ **ಡಾ. ಯರ್ರಿಸ್ವಾಮಿ** ಅವರು ಮಾತನಾಡುತ್ತ, ಸಂಶೋಧಕರು ಕುರಿಗಾಹಿ ಸಮುದಾಯದ ವಿಶಿಷ್ಟತೆ ಮತ್ತು ಧಾರ್ಮಿಕ ಆಚರಣೆಗಳ ಕುರಿತು ಸಂಶೋಧನೆಗೆ ಪೂರಕ ದತ್ತಾಂಶಗಳನ್ನು ಸಂಗ್ರಹಣೆಯಲ್ಲಿ ತೊಡಗಿಕೊಳ್ಳಬೇಕು. ಜ್ಞಾನವನ್ನು ವೃದ್ಧಿಸಲು ತಾವೇ ಅಧ್ಯಯನ ಸೂತ್ರಗಳನ್ನು ಹುಡುಕಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿದರು.




ಕುರಿಗಾಹಿಗಳ ಬದುಕು ಮತ್ತು ಬವಣೆ ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಡಾ. ಯರ್ರಿಸ್ವಾಮಿ ಈ ಅವರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಅಧ್ಯಾಪಕರು ಮತ್ತು ಸಂಶೋಧನಾರ್ಥಿಗಳು ಉಪಸ್ಥಿತರಿದ್ದರು. ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಸಂಶೋಧನಾರ್ಥಿ ಭೋಜರಾಜ ಆರ್. ರವರು ಪ್ರಾಸ್ತಾವಿಕ ಮಾತನಾಡಿದರು. ಸಂಶೋಧನಾರ್ಥಿ ಜ್ಯೋತಿ ನಿರೂಪಿಸಿದರು. ಸಂಶೋಧನಾರ್ಥಿ ತಿಪ್ಪೇಸ್ವಾಮಿಯವರು ವಂದಿಸಿದರು.



ಮಂಗಳವಾರ,18 ಫೆಬ್ರವರಿ 2025,
ಗಂಗಾವತಿ
ವಿಜಯ ಕರ್ನಾಟಕ VK

ಮಾಹಿತಿ ಕೇಂದ್ರ

## ತಳ ಸಮುದಾಯ ಅಧ್ಯಯನಕ್ಕೆ ಸ್ಪಂದನೆ: ಹಳ್ಳಿಕೇರಿ

ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ನಡೆದ ಕುರಿಗಾಹಿಗಳ ಬದುಕು ಮತ್ತು ಬವಣೆ ಕುರಿತು ಡಾ.ಎಫ್.ಟಿ.ಹಳ್ಳಿಕೇರಿ ಮಾತನಾಡಿದರು.

**ವಿಜಯನಗರ(ಹೊಸಪೇಟೆ):** ಕನ್ನಡ ವಿಶ್ವವಿದ್ಯಾಲಯ ತಳ ಸಮುದಾಯಗಳ ಅಭಿವೃದ್ಧಿಗೆ ಸದಾ ಸ್ಪಂದಿಸುತ್ತದೆ ಎಂದು ಭಾಷಾ ನಿಕಾಯದ ಡೀನ್ ಡಾ.ಎಫ್.ಟಿ. ಹಳ್ಳಿಕೇರಿ ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದಿಂದ ಸಮಾಜಮುಖಿ ತಿಂಗಳ ಮಾತು-6 ಕಾರ್ಯಕ್ರಮದಲ್ಲಿ 'ಕುರಿಗಾಹಿಗಳ ಬದುಕು ಮತ್ತು ಬವಣೆ' ಕುರಿತು ಮಾತನಾಡಿದರು. ತಳ ಸಮುದಾಯಗಳಲ್ಲಿ ಒಂದಾದ ಅಲೆಮಾರಿ ಕುರಿಗಾಹಿ ಸಮುದಾಯ ಅಪರೂಪದ ಸಮುದಾಯವಾಗಿದ್ದು, ಇಂತಹ ಸಮುದಾಯಗಳ ಕುರಿತು ಅಧ್ಯಯನ ಮಾಡುವ ಸಂಶೋಧನಾ ವಿದ್ಯಾರ್ಥಿಗಳು ಸಂಶೋಧನೆಯ ಆಕಾರವನ್ನು ತಾವೇ ಸೃಷ್ಟಿಸಬೇಕು ಎಂದು ಹೇಳಿದರು.

ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ.ಯರ್ರಿಸ್ವಾಮಿ ಮಾತನಾಡಿ, ಸಂಶೋಧಕರು ಕುರಿಗಾಹಿ ಸಮುದಾಯದ ವಿಶಿಷ್ಟತೆ ಮತ್ತು ಧಾರ್ಮಿಕ ಆಚರಣೆಗಳ ಕುರಿತು ಸಂಶೋಧನೆಗೆ ಪೂರಕ ದತ್ತಾಂಶಗಳನ್ನು ಸಂಗ್ರಹಣೆಯಲ್ಲಿ ತೊಡಗಿಕೊಳ್ಳಬೇಕು ಎಂದರು.

ಸಮಾಜಶಾಸ್ತ್ರ ಅಧ್ಯಯನದ ಸಂಶೋಧನಾ ವಿದ್ಯಾರ್ಥಿ ತಿಪ್ಪೇಸ್ವಾಮಿ ಮಾತನಾಡಿದರು.

ನಾನಾ ವಿಭಾಗಗಳ ಅಧ್ಯಾಪಕರು ಮತ್ತು ಸಂಶೋಧನಾ ವಿದ್ಯಾರ್ಥಿಗಳು ಇದ್ದರು.

# ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ

## ಕನ್ನಡ ವಿಶ್ವವಿದ್ಯಾಲಯ, ಹಂಪಿ

ವಿದ್ಯಾರಣ್ಯ – 583276

### ಸಮಾಜಮುಖಿ ತಿಂಗಳ ಮಾತು – ೬

# ಕುರಿಗಾಹಿಗಳ ಬದುಕು ಮತ್ತು ಬವಣೆ

**ವಿಷಯ ಮಂಡನೆ**

**ತಿಪ್ಪೇಶ ಬಿ.**

ಪಿಎಚ್.ಡಿ. ಸಂಶೋಧಕರು

ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ

**ಉಪಸ್ಥಿತಿ**

**ಡಾ. ಎಫ್. ಟಿ. ಹಳ್ಳಿಕೇರಿ**

ಡೀನ್, ಭಾಷಾ ನಿಕಾಯ

ಕನ್ನಡ ವಿಶ್ವವಿದ್ಯಾಲಯ, ಕವಿಹಂ

**ಅಧ್ಯಕ್ಷತೆ**

**ಡಾ. ಡಿ.ವಿ. ಪರಮಶಿವಮೂರ್ತಿ**

ಮಾನ್ಯ ಕುಲಪತಿಗಳು

ಕನ್ನಡ ವಿಶ್ವವಿದ್ಯಾಲಯ, ಹಂಪಿ

ದಿನಾಂಕ : 15–02–2025
ಸಮಯ : ಬೆಳಿಗ್ಗೆ 11.30ಕ್ಕೆ

ಸ್ಥಳ: ಸಭಾ ಭವನ, ಸಮಾಜಶಾಸ್ತ್ರ ಅಧ್ಯಯನ
ಮತ್ತು ಸಂಶೋಧನಾ ವಿಭಾಗ, ಕವಿಹಂ

## ತಮಗೆ ಆದರದ ಸ್ವಾಗತ

**ಭೋಜರಾಜ ಆರ್.**
ಸಂಚಾಲಕರು, ಪಿಎಚ್.ಡಿ.
ಸಂಶೋಧಕರು, ಸ.ಅ.ಸಂ.ವಿಭಾಗ

**ಡಾ. ಯರ್ರಿಸ್ವಾಮಿ ಈ.**
ಮುಖ್ಯಸ್ಥರು, ಸಮಾಜಶಾಸ್ತ್ರ ಅಧ್ಯಯನ
ಮತ್ತು ಸಂಶೋಧನಾ ವಿಭಾಗ, ಕವಿಹಂ

**ಡಾ. ವಿಜಯ್ ಪೂಣಚ್ಚ ತಂಬಂಡ**
ಕುಲಸಚಿವರು
ಕನ್ನಡ ವಿಶ್ವವಿದ್ಯಾಲಯ, ಹಂಪಿ